ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಅಂಗನವಾಡಿ ಮತ್ತು ಕಾರ್ಯಕರ್ತೆಯರಿಗೆ ಸಂಬಂಧಿಸಿದ ಮಾಹಿತಿ

ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):-

267 (369) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದೆ ; ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡುತ್ತಿರುವ ಗೌರವಧನ ಎಷ್ಟು ; ಅವರ ದಿನದ ಕಾರ್ಯಾವಧಿ ಎಷ್ಟು ;

(ಆ) ರಾಜ್ಯದಲ್ಲಿ ಉರ್ದು ಅಂಗನವಾಡಿ ಕೇಂದ್ರಗಳು ಇದೆಯೇ ; ಇಲ್ಲದಿದ್ದಲ್ಲಿ, ಅಲ್ಪಸಂಖ್ಯಾತರ ಕಲ್ಯಾಣದ ದೃಷ್ಟಿಯಿಂದ ಅಲ್ಪಸಂಖ್ಯಾತರು ಹೆಚ್ಚಾಗಿರುವ ಸ್ಥಳಗಳಲ್ಲಿ ಉರ್ದು ಅಂಗನವಾಡಿ ಕೇಂದ್ರಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಇ) ಅಂಗನವಾಡಿ ಕಾರ್ಯಕರ್ತೆಯರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸರ್ಕಾರದಿಂದ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)